ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2016–17 ಮತ್ತು 2017–18ನೇ ಸಾಲಿನಲ್ಲಿ ನಗರೋತ್ಥಾನ ವಿಶೇಷ ಮೂಲಭೂತ ಸೌಕರ್ಯಕ್ಕೆ ಬಂಡವಾಳ ಬೆಂಬಲ ಯೋಜನೆಯಡಿಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಯಲಹಂಕ ವಲಯ ವ್ಯಾಪ್ತಿಯಲ್ಲಿ ಕೈಗೊಳ್ಳುವ "Improvements to Hoysala Play Ground Balance Developmental Works"ರ ಕಾಮಗಾರಿಗೆ ಆಡಳಿತಾತ್ಮಕ ಹಾಗೂ ಟೆಂಡರ್‌ಗೆ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ನಅಇ 199 ಎಸ್‌ಎಫ್‌ಸಿ 2016 (ಭಾಗ–1), ದಿನಾಂಕ: 21–06–2016.

2. ಆಯುಕ್ತರು, ಬಿ.ಬಿ.ಎಂ.ಪಿ. ಪತ್ರ ಸಂಖ್ಯೆ: ಆಯುಕ್ತರು/ಜಿಆರ್/4385/2017–18, ದಿನಾಂಕ: 10–10–2017.

3. ದಿನಾಂಕ: 07–11–2017 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿ.

* * * * *

ಪ್ರಸ್ತಾವನೆ:

ಮೇಲೆ (1) ರಲ್ಲಿ ಓದಲಾದ ದಿನಾಂಕ: 21–06–2016ರ ಆದೇಶದಲ್ಲಿ ನಗರೋತ್ಥಾನ ಯೋಜನೆ, ವಿಶೇಷ ಮೂಲಭೂತ ಸೌಕರ್ಯಕ್ಕೆ ಬಂಡವಾಳ ಬೆಂಬಲ ಮತ್ತು ಸರೋವರ ಅಭಿವೃದ್ಧಿ ಯೋಜನೆಯಡಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ 2016–17 ಮತ್ತು 2017–18ನೇ ಸಾಲಿನಲ್ಲಿ ಒಟ್ಟು ರೂ.7300 ಕೋಟಿಗಳ ಅಂದಾಜು ಮೊತ್ತದಲ್ಲಿ ಕೈಗೊಳ್ಳುವ ಕಾಮಗಾರಿಗಳ ಕ್ರಿಯಾ ಯೋಜನೆಗೆ ಕೆಲವೊಂದು ಷರತ್ತುಗಳನ್ನು ವಿಧಿಸಿ ಅನುಮೋದನೆಯನ್ನು ನೀಡಲಾಗಿರುತ್ತದೆ.

2. ಮೇಲೆ (2) ರಲ್ಲಿ ಓದಲಾದ ದಿನಾಂಕ: 10–10–2017ರ ಪತ್ರದಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರು, 2016–17 ಮತ್ತು 2017–18ನೇ ಸಾಲಿನಲ್ಲಿ ನಗರೋತ್ಥಾನ ವಿಶೇಷ ಮೂಲಭೂತ ಸೌಕರ್ಯಕ್ಕೆ ಬಂಡವಾಳ ಬೆಂಬಲ ಯೋಜನೆಯಡಿಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಯಲಹಂಕ ವಲಯ ವ್ಯಾಪ್ತಿಯಲ್ಲಿ ಕೈಗೊಳ್ಳುವ "Improvements to Hoysala Play Ground Balance Developmental Works" ರ ಕಾಮಗಾರಿಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 199 ಎಸ್‌ಎಫ್‌ಸಿ 2016 (ಭಾಗ–1), ದಿನಾಂಕ: 21–06–2016 ರಂದು ಅನುಮೋದನೆಗೊಂಡಿರುವ ಕ್ರಿಯಾ ಯೋಜನೆಯಲ್ಲಿ ಅನುಬಂಧ–16ರ ಕ್ರಮ ಸಂಖ್ಯೆ: 55ರ ಕಾಮಗಾರಿಗೆ ರೂ.80.00 ಲಕ್ಷಗಳನ್ನು ನಿಗಧಿಪಡಿಸಲಾಗಿರುತ್ತದೆ.

3. ಮೇಲ್ಕಂಡ ಕಾಮಗಾರಿಗೆ ರೂ. 79.94 ಲಕ್ಷಗಳಿಗೆ ಯಲಹಂಕ ವಲಯದ ಯೋಜನಾ ವಿಭಾಗದ ಕಛೇರಿಯಿಂದ ದಿನಾಂಕ: 05–08–2017 ರಂದು ದ್ವಿಲಕೋಟೆ ಪದ್ಧತಿಯಲ್ಲಿ ಟೆಂಡರ್ ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಯ ತಾಂತ್ರಿಕ ಬಿಡ್‌ನ್ನು ದಿನಾಂಕ: 21–08–2017 ರಂದು ತೆರೆಯಲಾಗಿದ್ದು, ಟೆಂಡರ್‌ನಲ್ಲಿ ಭಾಗವಹಿಸಿದ್ದ

ಕಾರ್ಯಪಾಲಕ ಅಭಿಯಂತರರವರ ಕಛೇರಿ * ಬಿ.ಬಿ.ಎಂ.ಪಾ., ಬೆಂಗಳೂರು-91 * 338/17-18 ಯೋಜನಾ ವಿಭಾಗ 14/12/17

. . . 2 .

ಬಿಡ್‌ದಾರರು ಭಾಗವಹಿಸಿರುತ್ತಾರೆ. ಅದರಲ್ಲಿ ಶ್ರೀ ಹೆಚ್.ವಿ. ಓಂಕಾರಪ್ಪ ಇವರು ತಾಂತ್ರಿಕವಾಗಿ ಅರ್ಹತೆ ಹೊಂದಿರುವುದರಿಂದ ಸದರಿಯವರ ತಾಂತ್ರಿಕ ಬಿಡ್‌ನ್ನು ಅಂಗೀಕರಿಸಿ ಆರ್ಥಿಕ ಬಿಡ್‌ನ್ನು ತೆರೆಯಲು ಆಯುಕ್ತರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತೀರ್ಮಾನಿಸಲಾಗಿದ್ದು, ಸದರಿ ಸಭೆಯ ನಿರ್ಣಯದಂತೆ ತಾಂತ್ರಿಕವಾಗಿ ಅರ್ಹರಾದ ಗುತ್ತಿಗೆದಾರರ ಆರ್ಥಿಕ ಬಿಡ್‌ನ್ನು ದಿನಾಂಕ: 16-08-2017 ರಂದು ತೆರೆಯಲಾಗಿದ್ದು, ವಿವರಗಳು ಈ ಕೆಳಕಂಡಂತೆ ಇರುತ್ತವೆ.

ಕ್ರ ಸಂ.	ತಾಂತ್ರಿಕ ಮೌಲ್ಯ ಮಾಪನದಲ್ಲಿ ಅರ್ಹರಾದ ಗುತ್ತಿಗೆದಾರರು	ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ)	ಟೆಂಡರ್‌ಗಿಟ್ಟ ಮೊತ್ತ (ರೂ.ಗಳಲ್ಲಿ)	ಟೆಂಡರ್‌ನಲ್ಲಿ ನಮೂದಿಸಿರುವ ಮೊತ್ತ ರೂ.ಗಳಲ್ಲಿ)	2016-17ನೇ ಸಾಲಿನ ಪರಿಷ್ಕೃತ ದರಗಳಿಗೆ ಹೋಲಿಸಿದಾಗ ದಿನಾಂಕ: 01-07-2017
1.	ಶ್ರೀ ಹೆಚ್.ವಿ. ಓಂಕಾರಪ್ಪ	80.00	7994687.40	9071659.00	+13.47%

4. ಗುತ್ತಿಗೆದಾರರಾದ ಶ್ರೀ ಹೆಚ್.ವಿ. ಓಂಕಾರಪ್ಪ ರವರು ನಮೂದಿಸಿರುವ ಟೆಂಡರ್ ಮೊತ್ತ ರೂ. 9071659.00 ಗಳು ಅನುಮೋದಿತ ದರಗಳಿಗೆ ಹೋಲಿಸಿದಾಗ ಶೇ.13.47% ರಷ್ಟು ಹೆಚ್ಚಾಗಿರುತ್ತದೆ. ದಿನಾಂಕ: 22-09-2017 ರಂದು ಮುಖ್ಯ ಅಭಿಯಂತರರು, ಯಲಹಂಕ ರವರ ಕಚೇರಿಯಲ್ಲಿ ದರಸಂಧಾನ ಸಭೆ ನಡೆಸಲಾಗಿದ್ದು, ಗುತ್ತಿಗೆದಾರರು ಸದರಿ ಕಾಮಗಾರಿಯನ್ನು ರೂ. 87,84,687/-ಗಳಿಗೆ ನಿರ್ವಹಿಸಲು ಒಪ್ಪಿರುತ್ತಾರೆ. ಸದರಿ ಮೊತ್ತವು ಟೆಂಡರ್‌ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇ.9.88% ರಷ್ಟು ಹೆಚ್ಚಾಗಿರುತ್ತದೆ. ಸದರಿ ಪ್ಯಾಕೇಜಿನ ಕಾಮಗಾರಿಯ ಯೋಜನಾ ಮೊತ್ತ ರೂ. 80.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ಹಾಗೂ ಗುತ್ತಿಗೆದಾರರಾದ ಶ್ರೀ ಹೆಚ್.ವಿ. ಓಂಕಾರಪ್ಪ ರವರು ದರ ಸಂಧಾನದ ನಂತರ ನಮೂದಿಸಿರುವ ಮೊತ್ತ ರೂ. 87,84,687/-ಗಳ ಟೆಂಡರ್‌ಗೆ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

5. ಮೇಲೆ (4) ರಲ್ಲಿ ಓದಲಾದ ದಿನಾಂಕ: 07-11-2017 ರಂದು ನಡೆದ ಅಧಿಕಾರಯುಕ್ತ ಸಮಿತಿಯ ಸಭೆಯಲ್ಲಿ ವಿಷಯವನ್ನು ಚರ್ಚಿಸಿ ನಿರ್ಣಯಿಸಿದಂತೆ ಈ ಆದೇಶ.

ಸರ್ಕಾರಿ ಆದೇಶ ಸಂಖ್ಯೆ: ನಅಇ 578 ಎಂಎನ್‌ಪೈ 2017,
ಬೆಂಗಳೂರು, ದಿನಾಂಕ: 11-12-2017.

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, 2016-17 ಮತ್ತು 2017-18ನೇ ಸಾಲಿನಲ್ಲಿ ನಗರೋತ್ಥಾನ ವಿಶೇಷ ಮೂಲಭೂತ ಸೌಕರ್ಯಕ್ಕೆ ಬಂಡವಾಳ ಬೆಂಬಲ ಯೋಜನೆಯಡಿಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಯಲಹಂಕ ವಲಯ ವ್ಯಾಪ್ತಿಯಲ್ಲಿ ಕೈಗೊಳ್ಳುವ "Improvements to Hoysala Play Ground Balance Developmental Works" ರ ಕಾಮಗಾರಿಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 199 ಎಸ್‌ಎಫ್‌ಸಿ 2016 (ಭಾಗ-1), ದಿನಾಂಕ: 21-06-2016, ಅನುಬಂಧ-16ರ ಅನುಬಂಧ-16ರ ಕ್ರಮ ಸಂಖ್ಯೆ: 55ರ ಕ್ರಿಯಾ ಯೋಜನೆಯಲ್ಲಿ ಅನುಮೋದನೆಗೊಂಡಿರುವ ಕಾಮಗಾರಿಗೆ ಅಂದಾಜು ಮೊತ್ತ ರೂ.0.80 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ಹಾಗೂ ಅಧಿಕಾರಯುಕ್ತ ಸಮಿತಿಯು ಗುತ್ತಿಗೆದಾರರಾದ ಶ್ರೀ ಹೆಚ್.ವಿ. ಓಂಕಾರಪ್ಪ ರವರು ಸಂಧಾನದ ನಂತರ ನಮೂದಿಸಿರುವ ಅಂತಿಮ ಮೊತ್ತ ರೂ.0.8394 ಕೋಟಿಗಳು, 2016-17ನೇ ಸಾಲಿನ ದರಗಳಿಗೆ ಹೋಲಿಸಿದಾಗ ಶೇಕಡಾ 5% ರಷ್ಟು ಹೆಚ್ಚಿನ ದರಗಳಿಗೆ ಮಿತಿಗೊಳಿಸಿ, ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಟೆಂಡರ್‌ಗೆ ಸರ್ಕಾರದ ಅನುಮೋದನೆ ನೀಡಿದೆ.

1. ಮೇಲಿನ ಕಾಮಗಾರಿಯನ್ನು ಕೆ.ಟಿ.ಪಿ.ಪಿ. ಕಾಯ್ದೆ/ನಿಯಮಗಳು ಹಾಗೂ ಎಲ್ಲಾ ಚಾಲ್ತಿ ನಿಯಮಗಳನ್ನು ಪಾಲಿಸಿಕೊಂಡು ಅನುಷ್ಠಾನಗೊಳಿಸುವುದು.

...3.

2. ಈ ಕಾಮಗಾರಿಗೆ ತಗಲುವ ವೆಚ್ಚವನ್ನು ಸರ್ಕಾರದ ಆದೇಶ ಸಂಖ್ಯೆ: ನಲಅ 199 ಎಸ್‌ಎಫ್‌ಸಿ 2016 (ಭಾಗ-1), ದಿನಾಂಕ: 21-06-2016 ರಲ್ಲಿ 2016-17ನೇ ಸಾಲಿನಲ್ಲಿ ಮೀಸಲಿಟ್ಟ ನಗರೋತ್ಥಾನ ಯೋಜನೆಯ ಅನುದಾನದಿಂದ ಭರಿಸುವುದು ಹಾಗೂ ಹೆಚ್ಚುವರಿ ಟೆಂಡರ್ ಪ್ರೀಮಿಯಂ ಮೊತ್ತವನ್ನು ಪಾಲಿಕೆಯು ತನ್ನ ಸ್ವಂತ ನಿಧಿಯಿಂದಲೇ ಭರಿಸತಕ್ಕದ್ದು.

3. ಮೇಲಿನ ಕಾಮಗಾರಿಯನ್ನು ಸರ್ಕಾರದಿಂದ ಮಂಜೂರಾದ ಮೊತ್ತದ ಮಿತಿಯಲ್ಲಿಯೇ ಯಾವುದೇ ಹೆಚ್ಚುವರಿಯಾಗದಂತೆ ಅನುಷ್ಠಾನಗೊಳಿಸಲು ಕ್ರಮವಹಿಸತಕ್ಕದ್ದು.

4. ಸರ್ಕಾರವು ಕಾಮಗಾರಿಗಳಿಗೆ ಆಡಳಿತಾತ್ಮಕ ಮತ್ತು ಟೆಂಡರ್‌ಗಳಿಗೆ ಅನುಮೋದನೆ ನೀಡಿದ್ದಾಗ್ಯೂ ಸಹ ಕಾಮಗಾರಿಯು ಪುನರಾವರ್ತನೆ ಆಗದಂತೆ ನೋಡಿಕೊಳ್ಳತಕ್ಕದ್ದು. ಅನುಮೋದನೆಗೊಂಡಿರುವ ಕಾಮಗಾರಿಯನ್ನಲ್ಲದೆ ಯಾವುದೇ ಕಾರಣಕ್ಕೆ ಬೇರೆ ಕಾಮಗಾರಿಗಳನ್ನು ಕೈಗೊಳ್ಳಬಾರದೆಂದು ತಿಳಿಸಿದೆ.

5. ಮೇಲಿನ ಕಾಮಗಾರಿಗೆ 3rd Party Quality Monitors ಗಳನ್ನು ನೇಮಿಸಿಕೊಂಡು ಉತ್ತಮ ಗುಣಮಟ್ಟದಿಂದ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಕ್ರಮವಹಿಸತಕ್ಕದ್ದು.

6. ದಿನಾಂಕ: 07-11-2017ರ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿಯಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಹಾಗೂ ನಿಬಂಧನೆಗಳನ್ನು ತಪ್ಪದೆ ಪಾಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ.

(ಕೆ. ವಿಕೇಶ್ ಬಾಬು)
ಸರ್ಕಾರದ ಅಧೀನ ಕಾರ್ಯದರ್ಶಿ.
ನಗರಾಭಿವೃದ್ಧಿ ಇಲಾಖೆ (ಜಿ.ಜಿ.ಎಂ.ಪಿ.)

ಇವರಿಗೆ:

1. ಮಹಾಲೇಖಪಾಲರು, ಲೆಕ್ಕ ತಪಾಸಣೆ/ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6. ವಿಶೇಷ ಆಯುಕ್ತರು (ಯೋಜನೆ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ಪ್ರಧಾನ ಅಭಿಯಂತರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ 3 ಮತ್ತು 9) ವಿಧಾನಸೌಧ, ಬೆಂಗಳೂರು.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
11. ಸರ್ಕಾರದ ಉಪ ಕಾರ್ಯದರ್ಶಿಗಳು-3 ರವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
12. ಅಧೀಕ್ಷಕ ಅಭಿಯಂತರರು (ತಾಂತ್ರಿಕ ಕೋಶ), ನಗರಾಭಿವೃದ್ಧಿ ಇಲಾಖೆ.
13. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.